ಪಾಕಿಸ್ತಾನ್ ಜಿಂದಾಬಾದ್ ಘೋಷಣೆ; ಕಾಂಗ್ರೆಸ್‌ಗೆ ಮುಖಭಂಗ : ಅಶ್ವಥನಾರಾಯಣ್

ಉದಯಕಾಲ ನ್ಯೂಸ್

ಬೆಂಗಳೂರು: ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದು ಕೂಗಿದ ಮೂವರು ಯುವ ಕಾಂಗ್ರೆಸ್‌ನ ಕಾರ್ಯಕರ್ತರನ್ನು ಪೊಲೀಸರು ಬಂಧಿಸಿರುವುದನ್ನು ಸ್ವಾಗತಿಸುತ್ತೇವೆ. ಆದರೆ, ಆ ರೀತಿ ಘೋಷಣೆ ಕೂಗಿಲ್ಲ ಎಂದು ವಿತಂಡವಾದ ಮಾಡುವ ಕಾಂಗ್ರೆಸ್ ಮುಖಂಡರಿಗೆ ಇದೀಗ ತೀವ್ರ ಮುಖಭಂಗವಾಗಿದೆ ಎಂದು ಬಿಜೆಪಿ ರಾಜ್ಯ ಮುಖ್ಯ ವಕ್ತಾರ ಅಶ್ವಥನಾರಾಯಣ್ ಟೀಕಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು ತಮಗಾಗಿರುವ ಅಪಮಾನಕ್ಕೆ ಪ್ರತೀಕಾರವಾಗಿ ಮತ್ತು ಹತಾಶೆಯಿಂದ ಮಂಡ್ಯದಲ್ಲಿ ಎರಡು ವರ್ಷದ ಕೆಳಗೆ ಬಿಲಾವರ್ ಭುಟ್ಟೊ ವಿರುದ್ಧ ಬಿಜೆಪಿ ಕಾರ್ಯಕರ್ತರು ನಡೆಸುತ್ತಿದ್ದ ಪ್ರತಿಭಟನೆಯಲ್ಲಿ ರವಿ ಅವರು ಪಾಕಿಸ್ತಾನ ಮುರ್ದಾಬಾದ್ ಎಂದು ಕೂಗಿದ್ದರು. ಅವರಿಗೆ ಹಿಂದಿ ಭಾಷೆ ತಿಳಿಯದ ಕಾರಣ ಅವರು ಅಚಾತುರ್ಯದಿಂದ ಪಾಕಿಸ್ತಾನ ಜಿಂದಾಬಾದ್ ಎಂದು ಕೂಗಿದ್ದರು. ಆ ನಿಷ್ಠಾವಂತ ಕಾರ್ಯಕರ್ತರು ತಮ್ಮ ತಪ್ಪಿನ ಅರಿವಾಗಿ ಅವರು ಸ್ಪಷ್ಟೀಕರಣ ನೀಡಿದ್ದಲ್ಲದೆ ತಮ್ಮ ತಪ್ಪಿಗೆ ಕ್ಷಮೆ ಕೋರಿದ್ದರು. ಅವರು ಘೋಷಣೆಯನ್ನು ಉದ್ದೇಶಪೂರ್ವಕವಾಗಿ ಕೂಗಿದ್ದಲ್ಲಾ ಎಂದು ತನಿಖೆಯ ನಂತರ ತಿಳಿದ ಮೇಲೆ ಪೊಲೀಸರು ಅವರಿಗೆ ಎಚ್ಚರಿಕೆ ನೀಡಿ ಕಳುಹಿಸಿದ್ದರು.

ಆಗಿರುವ ಘಟನೆಗಳನ್ನು ವಿಷಯಾಂತರಗೊಳಿಸುವುದು ಮತ್ತು ಸೇಡಿನ ಭಾವನೆಯಿಂದ ಅಮಾಯಕ ಕಾರ್ಯಕರ್ತರನ್ನು ಬಂಧಿಸುವ ಉದ್ಧಟತನ ತೋರಿರುವುದನ್ನು ನಾವು ಸಾರಾಸಗಟಾಗಿ ಖಂಡಿಸುತ್ತೇವೆ ಎಂದಿದ್ದಾರೆ.

ಮುಸ್ಲಿಂ ಯುವಕರನ್ನು ಬಂಧನ ಮಾಡಿದ ಕಾರಣಕ್ಕೆ ಮುಚ್ಚಿ ಹೋಗಿದ್ದ ಪ್ರಕರಣದಲ್ಲಿ ಹಿಂದೂ ಯುವಕರನ್ನು ಬಂಧಿಸಿರುವುದು ಇವರ ತುಷ್ಟೀಕರಣ ನೀತಿಯ ಭಾಗವಾಗಿದೆ. ಕಳೆದವಾರ ವಿಧಾನ ಸೌಧದಲ್ಲಿ ''ಪಾಕಿಸ್ತಾನ ಜಿಂದಾಬಾದ್'' ಎಂದು ಕೂಗಿದ್ದು ವಿಡೀಯೊದಲ್ಲಿ ಸ್ಪಷ್ಟವಾಗಿದ್ದರೂ ಆ ದೇಶ ದ್ರೋಹಿಗಳನ್ನು ಬೆಂಬಲಿಸಿದ ಕಾಂಗ್ರೆಸ್ ಸಚಿವರ ವಿರುದ್ಧವೂ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದ್ದಾರೆ.

ಅಪರಾಧ ಮಾಡುವುದು ಮತ್ತು ಅಪರಾಧಿಗಳನ್ನು ಬೆಂಬಲಿಸುವುದು ಅಷ್ಟೇ ಗಂಭೀರ ಅಪರಾಧವಾದ್ದರಿಂದ ಪೊಲೀಸರು ಆರೋಪಿಗಳನ್ನು ಬೆಂಬಲಿಸಿದ ಮೇಲೆಯೂ ಮೊಕದ್ದಮೆ ದಾಖಲು ಮಾಡಬೇಕು. ಸರ್ಕಾರ ಅಮಾಯಕ ಕಾರ್ಯಕರ್ತರ ಮೇಲೆ ಹೂಡಿರುವ ಸುಳ್ಳು ಮೊಕದ್ದಮೆಯನ್ನು ವಾಪಸ್ ಪಡೆಯಬೇಕು ಇಲ್ಲ ಅಪರಾಧಿಗಳ ಬೆಂಬಲಕ್ಕೆ ನಿಂತಿದ್ದ ಸರ್ಕಾರದ ಮಂತ್ರಿಗಳ ವಿರುದ್ಧವೂ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯದ ನಾಲ್ಕು ಕೃಷಿ ವಿವಿ ಹುದ್ದೆಗಳ ಭರ್ತಿಗೆ ಕ್ರಮ

ಉದಯಕಾಲ ನ್ಯೂಸ್

ಬೆಂಗಳೂರು: ಕೃಷಿ ವಿಶ್ವವಿದ್ಯಾಲಯಗಳಲ್ಲಿ ಗುಣಾತ್ಮಕವಾಗಿ ಕಾರ್ಯಕ್ರಮ ಅನುಷ್ಠಾನಕ್ಕೆ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಸೂಚನೆ ನೀಡಿದರು. ವಿಕಾಸಸೌಧದ ಸಮಿತಿ ಕೊಠಡಿಯಲ್ಲಿ ವಿಶ್ವವಿದ್ಯಾಲಯಗಳ ಪ್ರಗತಿ ಪರಿಶೀಲನೆ ನಡೆಸಿದ ಕೃಷಿ ಸಚಿವರು, ಎಲ್ಲಾ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಸೂಚಿಸಿದರು. ಶೇ.100 ವಿಶ್ವವಿದ್ಯಾನಿಲಯ ಅನುದಾನ ಇರುವ ಹುದ್ದೆಗಳಿಗೆ ಆರ್ಥಿಕ ಇಲಾಖೆಗೆ ಕೇವಲ ಮಾಹಿತಿ ನೀಡಿ ನೇಮಕಾತಿ ಮಾಡಿಕೊಳ್ಳಲು ಅನುಕೂಲವಾಗುವಂತೆ ಸೂಕ್ತ ಮಾರ್ಗಸೂಚಿ ಹೊರಡಿಸಬೇಕಿದೆ ಎಂದು ಸೂಚಿಸಿದರು. ಕೃಷಿ ವಿಶ್ವವಿದ್ಯಾನಿಲಯಗಳು ಹಾಗೂ ಸಚಿವಾಲಯದ ನಡುವೆ ಸೂಕ್ತ ಸಮನ್ವಯ ಅಗತ್ಯವಿದೆ ಎಂದು ಕೃಷಿ ವಿಶ್ವವಿದ್ಯಾನಿಲಯಗಳ ಕುಲಪತಿಗಳಿಗೆ ಸಚಿವರು ತಿಳಿಸಿದರು.

ಕೃಷಿ ವಿಶ್ವ ವಿದ್ಯಾನಿಲಯಗಳು ಕೇವಲ ಸಂಶೋಧನೆಗೆ ಸೀಮಿತವಾಗದೆ ಕೃಷಿ ಹಾಗೂ ಕೃಷಿಕರ ಶ್ರೇಯೋಭಿವೃದ್ಧಿಗೆ ಬಳಕೆಯಾಗಬೇಕು. ಸರ್ಕಾರ ಕೃಷಿ ವಿವಿಗಳಿಗೆ ಪ್ರೋತ್ಸಾಹ ನೀಡುತ್ತಿದೆ. ಅದರ ಫಲ ರೈತರಿಗೆ ವರ್ಗಾವಣೆಯಾಗಬೇಕು ಎಂದು ಕೃಷಿ ಸಚಿವರು ಸೂಚನೆ ನೀಡಿದರು. ಕೃಷಿ ಇಲಾಖೆ ಕಾರ್ಯದರ್ಶಿ ಅನ್ಬುಕುಮಾರ್, ಬೆಂಗಳೂರು, ಶಿವಮೊಗ್ಗ, ಧಾರವಾಡ ಹಾಗೂ ರಾಯಚೂರು ಕೃಷಿ ವಿಶ್ವವಿದ್ಯಾನಿಲಯಗಳ ಕುಲಪತಿಗಳು ಹಾಗೂ ಕುಲಸಚಿವರು ಇದ್ದರು.

ಖಚಿತ ವರದಿ ಆಧರಿಸಿ ಆರೋಪಿಗಳ ಬಂಧನ: ಜಿ. ಪರಮೇಶ್ವರ್

ಉದಯಕಾಲ ನ್ಯೂಸ್

ಬೆಂಗಳೂರು: ವಿಧಾನಸೌಧದ ಆವರಣದಲ್ಲಿ ಪಾಕಿಸ್ತಾನ ಪರ ಘೋಷಣೆ ಕೂಗಿದ ಆರೋಪ ಪ್ರಕರಣಕ್ಕೆ ಕುರಿತಂತೆ ಆರೋಪಿಗಳ ಬಂಧನವನ್ನು ಸಮರ್ಥಿಸಿಕೊಂಡಿರುವ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇಲಾಖೆಯ ಅಧಿಕೃತ ಎಫ್‌ಎಸ್‌ಎಲ್ ವರದಿ ಆಧಾರವಾಗಿಟ್ಟುಕೊಂಡು ಆರೋಪಿಗಳನ್ನು ಬಂಧಿಸಲಾಗಿದೆ ಎಂದು ತಿಳಿಸಿದ್ದಾರೆ. ಸದಾಶಿವನಗರದ ತಮ್ಮ ನಿವಾಸದ ಬಳಿ ಮಂಗಳವಾರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ತಪ್ಪಿತಸ್ಥರ ವಿರುದ್ಧ ಮುಲಾಜಿಲ್ಲದೆ ಕ್ರಮ ಕೈಗೊಳ್ಳುವುದಾಗಿ ಸದನದಲ್ಲಿ ಉತ್ತರಿಸಿದ್ದೆ, ಖಚಿತ ಮಾಹಿತಿ ಮೇರೆಗೆ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ ಎಂದರು. ಖಾಸಗಿಯವರು ಸಹ ಎಫ್‌ಎಸ್‌ಎಲ್ ವರದಿ ಬಿಡುಗಡೆ ಮಾಡಿದ್ದರು. ನಾವು ಆ ವರದಿಯನ್ನು ಅಧಿಕೃತ ಎಂದು ಪರಿಗಣಿಸುವುದಿಲ್ಲ ಎಂದರು. ವಿರೋಧ ಪಕ್ಷದವರು ದಿನಕ್ಕೊಂದು ರೀತಿ ಹೇಳಿಕೆ ನೀಡುತ್ತಾರೆ.

3 ದಿನಗಳ ಭಾರತದ ಅತಿ ದೊಡ್ಡ ತೋಟಗಾರಿಕಾ ಮೇಳಕ್ಕೆ ಭಾನುಪ್ರಕಾಶ್ ಶ್ರೀವಾತ್ಸವರಿಂದ ಚಾಲನೆ

ರಾಷ್ಟ್ರೀಯ ತೋಟಗಾರಿಕಾ ಮೇಳ 2024ಕ್ಕೆ ಚಾಲನೆ

ಉದಯಕಾಲ ನ್ಯೂಸ್

ಯಲಹಂಕ : ಹೆಸರಘಟ್ಟದ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯ ಆವರಣದಲ್ಲಿ 3 ದಿನಗಳ ಕಾಲ ಆಯೋಜಿಸಿರುವ ಭಾರತದ ಅತಿದೊಡ್ಡ ತೋಟಗಾರಿಕಾ ಮೇಳ ಎನಿಸಿರುವ ರಾಷ್ಟ್ರೀಯ ತೋಟಗಾರಿಕಾ ಮೇಳ 2024 ವನ್ನು ಬಿಇಎಲ್ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಭಾನುಪ್ರಕಾಶ್ ಶ್ರೀವಾತ್ಸವ ಮಂಗಳವಾರ ಉದ್ಘಾಟಿಸಿದರು.

ನಂತರ ಅವರು ಮಾತನಾಡಿ 'ರಾಷ್ಟ್ರೀಯ ತೋಟಗಾರಿಕಾ ಮೇಳವು ಹಲವಾರು ಸಾಮರ್ಥ್ಯ ನಿರ್ಮಾಣ ಕಾರ್ಯಕ್ರಮಗಳು ಮತ್ತು ನೂತನ ಸಂಶೋಧನೆಗಳ ಪ್ರದರ್ಶನಗಳ ಮೂಲಕ ದೇಶದ ರೈತರು, ಉದ್ಯಮಿಗಳು ಮತ್ತು ವಿದ್ಯಾರ್ಥಿಗಳ ಅಗತ್ಯಗಳನ್ನು ಪೂರೈಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ.

ತೋಟಗಾರಿಕಾ ಕ್ಷೇತ್ರದಲ್ಲಿನ ವಿವಿಧ ಬಳಕೆದಾರರ ಅನುಕೂಲಕ್ಕಾಗಿ ಹೆಚ್ಚಿನ ಸಹಭಾಗಿತ್ವ ಕಾರ್ಯಕ್ರಮಗಳಿಗೆ ಒತ್ತು ನೀಡಬೇಕು ಎಂದ ಅವರು ತೋಟಗಾರಿಕಾ ಕ್ಷೇತ್ರಕ್ಕೆ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆ ನೀಡಿರುವ ಕೊಡುಗೆಯನ್ನು ಶ್ಲಾಘಿಸಿದರು. ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯ ನಿರ್ದೇಶಕ ಡಾ.ಪ್ರಕಾಶ್ ಪಾಟೀಲ

ಮಾತನಾಡಿ 'ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯ ಕಾರ್ಯಸಾಧನೆ ದೇಶದಲ್ಲಿ ಮಾತ್ರವಲ್ಲದೆ ಆಗ್ನೇಯ ಏಷ್ಯಾ ಪ್ರದೇಶದಲ್ಲೂ ಸಹ ಉನ್ನತ ಮಟ್ಟದಲ್ಲಿದೆ, ಈ ಸಾಧನೆಯಲ್ಲಿ ಸಂಸ್ಥೆಯ ವಿಜ್ಞಾನಿಗಳ ಪ್ರಯತ್ನ ಶ್ಲಾಘನೀಯ ಎಂದರು. ಮೇಳದ ಅಧ್ಯಕ್ಷತೆ ವಹಿಸಿದ್ದ ಭಾರತೀಯ ಕೃಷಿ ಸಂಶೋಧನಾ ಪರಿಷತ್ ನ ತೋಟಗಾರಿಕಾ ವಿಭಾಗದ ಉಪ ಮಹಾ ನಿರ್ದೇಶಕ ಪ್ರೊ. ಸಂಜಯ್ ಕುಮಾರ್ ಸಿಂಗ್ ಮಾತನಾಡಿ ''ಭಾರತದ ಆರ್ಥಿಕತೆಯಲ್ಲಿ, ವಿಶೇಷವಾಗಿ ಕೋವಿಡ್ ಸಾಂಕ್ರಾಮಿಕದ ನಂತರ ಕೃಷಿ ಉದ್ಯಮ ಶೀಲತೆ ಮತ್ತು ಉದ್ಯೋಗ ಸೃಷ್ಟಿಯ ಮೂಲಕ ದೇಶದ ಆದಾಯ ಹೆಚ್ಚಿಸುವಲ್ಲಿ ತೋಟಗಾರಿಕಾ ಸಂಶೋಧನ ಸಂಸ್ಥೆಯ ಕೊಡುಗೆ ಪ್ರಶಂಸನೀಯ, ತೋಟಗಾರಿಕಾ ಕ್ಷೇತ್ರದಲ್ಲಿನ ನವೀನ ತಂತ್ರಜ್ಞಾನಗಳ ಅಭಿವೃದ್ಧಿ ಮತ್ತು ಅಳವಡಿಕೆಗೆ ಸಂಸ್ಥೆ ಹೆಚ್ಚಿನ ಒತ್ತು ನೀಡಬೇಕು ಎಂದು ಸಲಹೆ ನೀಡಿದರು. ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯ ತಂತ್ರಜ್ಞಾನಗಳು ತೋಟಗಾರಿಕಾ ಕ್ಷೇತ್ರಕ್ಕೆ, ವಿಶೇಷವಾಗಿ ಲಕ್ಷದ್ವೀಪ ಸೇರಿದಂತೆ ದೇಶದ ದೂರ ಪ್ರದೇಶಗಳಲ್ಲಿ ರೈತರ ಆದಾಯವನ್ನು ಹೆಚ್ಚಿಸುವಲ್ಲಿ ಮತ್ತು ಮಹಿಳಾ ಉದ್ಯೋಗಿಗಳನ್ನು ಸೃಷ್ಟಿಸುವಲ್ಲಿ ಅಪಾರ ಕೊಡುಗೆ ನೀಡುತ್ತಿವೆ ಎಂದು ಕೃಷಿ ತಂತ್ರಜ್ಞಾನ ಸಂಶೋಧನಾ ಸಂಸ್ಥೆಯ ನಿರ್ದೇಶಕ ಸುಬ್ರಹ್ಮಣ್ಯಂ ಶ್ಲಾಘನೆ ವ್ಯಕ್ತಪಡಿಸಿದರು. 3 ದಿನಗಳ ಕಾಲ ನಡೆಯಲಿರುವ ಈ ತೋಟಗಾರಿಕಾ ಮೇಳದಲ್ಲಿ ದೇಶದ 20 ರಾಜ್ಯಗಳ ರೈತರು ಭಾಗವಹಿಸುತ್ತಿದ್ದು, 50ಕ್ಕೂ ಹೆಚ್ಚು ಐಸಿಆರ್ ಸಂಸ್ಥೆಗಳು ಮತ್ತು ಕೆವಿಕೆಗಳು ಭಾಗವಹಿಸುತ್ತಿವೆ.

ಮೇಳದಲ್ಲಿ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯ ವತಿಯಿಂದ ಕೈಗೊಂಡಿರುವ 238 ತಂತ್ರಜ್ಞಾನಗಳ ಪ್ರಾತ್ಯಕ್ಷಿಕೆ ಏರ್ಪಡಿಸಲಾಗಿದೆ. ಹಾಗೆಯೇ ಸರ್ಕಾರಿ ಮತ್ತು ಸರ್ಕಾರೇತರ ಸಂಸ್ಥೆಗಳಿಂದ ಕೈಗೊಂಡಿರುವ ಆವಿಷ್ಕಾರ ಮತ್ತು ತಂತ್ರಜ್ಞಾನಗಳನ್ನು 250ಕ್ಕೂ ಹೆಚ್ಚು ಮಳಿಗೆಗಳಲ್ಲಿ ಪ್ರದರ್ಶಿಸಲಾಗುತ್ತಿದೆ ಎಂದು ತೋಟಗಾರಿಕಾ ಮೇಳದ ಆಯೋಜನಾ ಕಾರ್ಯದರ್ಶಿ ಡಾ.ಎಂ.ವಿ.ಧನಂಜಯ ಮೇಳ ಕುರಿತು ವಿಸ್ತೃತ ಮಾಹಿತಿ ನೀಡಿದರು.

ಮೇಳದ ಉದ್ಘಾಟನಾ ಸಮಾರಂಭದಲ್ಲಿ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು ಅಧಿಕ ಉತ್ಪಾದನೆಯ ಮೂಲಕ ಇತರ ರೈತರಿಗೆ ಮಾದರಿ ಎನಿಸಿರುವ 12 ಪ್ರಗತಿಪರ ರೈತರು, ತೋಟಗಾರಿಕಾ ಕ್ಷೇತ್ರಕ್ಕೆ ಅನುಪಮ ಕೊಡುಗೆ ನೀಡಿರುವ 4 ಉದ್ಯಮಿಗಳು, 5 ರೈತ ಉತ್ಪಾದಕ ಸಂಸ್ಥೆಗಳು ಮತ್ತು 5 ಕೃಷಿ ವಿಜ್ಞಾನ ಕೇಂದ್ರಗಳ ಅಧಿಕಾರಿಗಳನ್ನು ಗೌರವಿಸಿ ಸನ್ಮಾನಿಸಲಾಯಿತು.

ಸಮಾರಂಭದಲ್ಲಿ ಎನ್ ಎಚ್ ಎಫ್ 2024 ಸ್ಮರಣಿಕೆ ಬಿಡುಗಡೆ, ತೋಟಗಾರಿಕಾ ಬೆಳೆಗಳಿಗೆ ಸಸ್ಯ ಅಂಗಾಂಶ ಮತ್ತು ವ್ಯಾಖ್ಯಾನ, ಕೊಯ್ಲಿನ ನಂತರದ ತಂತ್ರಜ್ಞಾನ ಮತ್ತು ಕೃಷಿ ಇಂಜಿನಿಯರಿಂಗ್, ಕೃಷಿ ವ್ಯವಹಾರ ಇನ್ಕ್ಯುಬೇಷನ್ ಕೇಂದ್ರದ ಸ್ಥಿತಿ, ನವೋದಯಗಳಿಗೆ ದಾರಿ, 'ಔಷಧೀಯ ಗಿಡಮೂಲಿಕೆ ಗಳ ಮಣ್ಣುರಹಿತ ಕೃಷಿಗೆ ಮಾರ್ಗದರ್ಶಿ' ಎಂಬ ವಿಸ್ತರಣಾ ಫೋಲ್ಡರ್ ಗಳು ಮತ್ತು ಐಐಎಚ್‌ಆರ್ ತಂತ್ರಜ್ಞಾನಗಳ ರಿಯಾಲಿಟಿ ಪೋಸ್ಟ್ ಕಾರ್ಡ್ ಗಳಂತಹ ತಂತ್ರಜ್ಞಾನ ಮಾಹಿತಿ ಪ್ರಕಟಣೆಗಳನ್ನು ಬಿಡುಗಡೆ ಮಾಡಲಾಯಿತು. ಅಲ್ಲದೆ ತುಮಕೂರಿನ ಐಸಿಎಆರ್-ಕೆವಿಕೆಗೆ 'ಅರ್ಕಾ ಫ್ಲೋರಲ್ ಅಗರಬತ್ತಿ ಮತ್ತು ಧೂಪ್' ಮತ್ತು ಕೊಡಗಿನ ರಮೇಶ್ ಎಸ್.ಪೊನ್ನತ್ಕೋಟ್ಟೆ ಅವರಿಗೆ 'ಅರ್ಕಾ ಸುಪ್ರೀಂ ಆವಕಾಡೊ ವೆರೈಟಿ' ಎಂಬ ಎರಡು ತಂತ್ರಜ್ಞಾನಗಳಿಗೆ ತಿಳುವಳಿಕೆ ಒಪ್ಪಂದಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು.

ಪಾಕ್ ಪರ ಘೋಷಣೆ ಕೂಗುವವರನ್ನು ಜನತೆ ಕ್ಷಮಿಸುವುದಿಲ್ಲ ಬಿಜೆಪಿ ಬೂತ್ ಸಮಾವೇಶದಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ

ಉದಯಕಾಲ ನ್ಯೂಸ್

ಬೆಂಗಳೂರು: ಅಯೋಧ್ಯೆಯಲ್ಲಿ ಶ್ರೀರಾಮಮಂದಿರ ನಿರ್ಮಾಣ, ಜಮ್ಮು- ಕಾಶ್ಮೀರಕ್ಕೆ ಸಂಬಂಧಿಸಿದ 370ನೇ ವಿಧಿ ರದ್ದು ಸೇರಿದಂತೆ ವಿವಿಧ ಭರವಸೆಗಳನ್ನು ಈಡೇರಿಸಿ ಬಿಜೆಪಿ ನುಡಿದಂತೆ ನಡೆದಿದೆ. ದೂರದೃಷ್ಟಿಯಿರುವ ಬಿಜೆಪಿಯನ್ನು ಜನತೆ ಬೆಂಬಲಿಸುವ ವಿಶ್ವಾಸವಿದೆ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಹೇಳಿದರು.

ಚಿಕ್ಕೋಡಿಯಲ್ಲಿ ಮಂಗಳವಾರ ಬಿಜೆಪಿ ಬೂತ್ ಸಮಾವೇಶದಲ್ಲಿ ಮಾತನಾಡಿದ ಅವರು, ಪಾಕಿಸ್ತಾನ ಪರ ಇರುವವರನ್ನು ಭಾರತಮಾತೆ ಎಂದೂ ಕ್ಷಮಿಸುವುದಿಲ್ಲ, ಪಾಕಿಸ್ತಾನ ಜಿಂದಾಬಾದ್ ಘೋಷಣೆ ಕೂಗುವ ರಾಜ್ಯಸಭಾ ಸದಸ್ಯರಿರುವ ಕಾಂಗ್ರೆಸ್ ಪಕ್ಷದವರನ್ನು ರಾಜ್ಯದ ಜನತೆ ಬೆಂಬಲಿಸುವುದಿಲ್ಲ, ನಮ್ಮ ಸರಕಾರ ಇದ್ದಾಗ ಶಾಂತ ಪರಿಸ್ಥಿತಿ ನೆಲೆಸಿತ್ತು. ಈಗ ಬಾಂಬ್ ಸ್ಫೋಟಿಸುತ್ತಿದೆ ಎಂದು ಹೇಳಿದರು.

ಬಡವರು, ಮಹಿಳೆಯರು (ನಾರಿಶಕ್ತಿ), ರೈತರು, ಯುವಜನತೆಯ ಆಶಯಗಳನ್ನು ಈಡೇರಿಸಿದ ಪಕ್ಷವಾಗಿ ಬಿಜೆಪಿ ಬೆಳೆದಿದೆ. ಬಿಜೆಪಿ ಸಿದ್ಧಾಂತ ಆಧರಿಸಿದ ಪಕ್ಷ. ಮುಸ್ಲಿಂ ಮಹಿಳೆಯರಿಗೆ ಅನ್ಯಾಯ ಆಗಲು ಬಿಡುವುದಿಲ್ಲ ಎಂದು ನಾವು ಹೇಳಿದ್ದೆವು. ತ್ರಿವಳಿ ತಲಾಖ್ ಪದ್ಧತಿಯನ್ನು ನಾವು ರದ್ದು ಮಾಡಿದ್ದೇವೆ. ಆದರೆ, ಕಾಂಗ್ರೆಸ್ ಪಕ್ಷ ತುಷ್ಟೀಕರಣದ ಕಾರಣಕ್ಕಾಗಿ ಈ ಕಡೆ ಗಮನ ಹರಿಸಿರಲಿಲ್ಲ ಎಂದರು.

ವಿಶ್ವದ ಅತ್ಯಂತ ದೊಡ್ಡ ರಾಜಕೀಯ ಪಕ್ಷ ನಮ್ಮದು. ಅಣ್ಣಾಸಾಹೇಬ್ ಜೊಲ್ಲೆಯವರು ಸೇರಿ 303 ಸಂಸದರು ನಮ್ಮ ಪಕ್ಷದವರು ಲೋಕಸಭೆಯಲ್ಲಿದ್ದಾರೆ. ನಮ್ಮ ಯುವಜನರಿಗೆ ತರಬೇತಿ ನೀಡಿ ಪ್ರಧಾನಿ ಮೋದಿಯವರು ಆತ್ಮನಿರ್ಭರರನ್ನಾಗಿ ಮಾಡಿದ್ದಾರೆ ಎಂದು ತಿಳಿಸಿದರು.

ಸ್ವಾವಲಂಬಿ, ವಿಶ್ವಾಸಯುಕ್ತ ಜನರಿರುವ ದೇಶವನ್ನಾಗಿ ಭಾರತವನ್ನು ಮೋದಿಯವರು ಪರಿವರ್ತಿಸಿದ್ದಾರೆ. ಆತ್ಮನಿರ್ಭರ ದೇಶವಾಗಿ ಅದು ಬದಲಾಗುತ್ತಿದೆ. ಪ್ರಧಾನಿಯವರು ದೇಶವನ್ನು ಆತ್ಮವಿಶ್ವಾಸವುಳ್ಳ ರಾಷ್ಟ್ರವಾಗಿ ಪರಿವರ್ತಿಸಿದ್ದನ್ನು ನಾವು ಜನತೆಯ ಮುಂದಿಡಬೇಕು ಎಂದು ಮನವಿ ಮಾಡಿದರು.

ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಮಾತನಾಡಿ, ಲೋಕಸಭಾ

ಚುನಾವಣೆಗೆ ಕೇವಲ 50-60 ದಿನಗಳು ಬಾಕಿ ಇದೆ. ಬಿಜೆಪಿ- ಜೆಡಿಎಸ್ ಒಂದಾಗಿ ರಾಜ್ಯದ ಎಲ್ಲ 28 ಕ್ಷೇತ್ರಗಳನ್ನು ಗೆಲ್ಲಲು ಶಪಥ ಮಾಡಿದ್ದೇನೆ. ಚಿಕ್ಕೋಡಿ ಲೋಕಸಭಾ ಕ್ಷೇತ್ರದಲ್ಲೂ ದೊಡ್ಡ ಅಂತರದಲ್ಲಿ ಬಿಜೆಪಿ ಗೆಲ್ಲಿಸಲು ಮನವಿ ಮಾಡಿದರು.

ರೈತರ ಸಂಕಷ್ಟಕ್ಕೆ ರಾಜ್ಯ ಸರಕಾರ ಸ್ಪಂದಿಸುತ್ತಿಲ್ಲ. ಆದರೆ, ಅಲ್ಪಸಂಖ್ಯಾತರ ಅಭಿವೃದ್ಧಿ ಕಾರ್ಯಕ್ಕೆ ಮುಖ್ಯಮಂತ್ರಿಗಳು 10 ಸಾವಿರ ಕೋಟಿ ಅನುದಾನ ಪ್ರಕಟಿಸಿದ್ದಾರೆ. ರೈತರಿಗೆ ಪರಿಹಾರ ನೀಡಲು ಕಾಂಗ್ರೆಸ್ ಸರಕಾರದ ಬಳಿ ಹಣ ಇಲ್ಲ. ಆದರೆ, ಅಲ್ಪಸಂಖ್ಯಾತರ ತುಷ್ಟೀಕರಣಕ್ಕೆ ಅದು ಮುಂದಾಗಿದೆ ಎಂದು ಟೀಕಿಸಿದರು.

ರಾಜ್ಯಸಭಾ ಚುನಾವಣೆಯ ಬಳಿಕ ಗೆದ್ದ ಕಾಂಗ್ರೆಸ್ ಅಭ್ಯರ್ಥಿ ನಾಸೀರ್ ಹುಸೇನ್ ಬೆಂಬಲಿಗರು ವಿಧಾನಸೌಧದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಘೋಷಣೆ ಕೂಗಿದ್ದಾರೆ. ಬಿಜೆಪಿ ಹೋರಾಟದ ಬಳಿಕ ಮೂವರನ್ನು ಬಂಧಿಸಿದ್ದಾರೆ. ಕಾಂಗ್ರೆಸ್ ಸರಕಾರ, ಮುಖ್ಯಮಂತ್ರಿಗಳಿಗೆ ಕಿಂಚಿತ್ತಾದರೂ ದೇಶಪ್ರೇಮ ಇದ್ದರೆ ಪಾಕಿಸ್ತಾನ್ ಜಿಂದಾಬಾದ್ ಘೋಷಣೆ ಕೂಗಿದವರಿಗೆ ಶಕ್ತಿ ನೀಡಿದ ರಾಜ್ಯಸಭಾ ಎಂ.ಪಿ. ನಾಸೀರ್ ಹುಸೇನ್ ವಿರುದ್ಧ ಕೂಡ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ರಾಜ್ಯಸಭಾ ಮಾಜಿ ಸದಸ್ಯ ಪ್ರಭಾಕರ್ ಕೋರೆ, ಶಾಸಕ ರಮೇಶ್ ಕತ್ತಿ, ಮಾಜಿ ಸಚಿವೆ ಶಶಿಕಲಾ ಜೊಲ್ಲೆ, ಚಿಕ್ಕೋಡಿ ಜಿಲ್ಲಾಧ್ಯಕ್ಷ ಸತೀಶ್ ಅಪ್ಪಾಜಿಗೋಲ್, ಲೋಕಸಭಾ ಚುನಾವಣೆ ರಾಜ್ಯ ಉಸ್ತುವಾರಿ ಮತ್ತು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರ